# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಛೇರಿಯ ಸಭಾಂಗಣದಲ್ಲಿ ದಿನಾಂಕ: 17-05-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ.ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಡಾ॥ ಶಾಹೀನಾ, ವೈದ್ಯಾಧಿಕಾರಿಗಳು, ಆರೋಗ್ಯ ಕೇಂದ್ರ, ವಾರ್ಡ್ ಸಂಖ್ಯೆ.29.
4. ಶ್ರೀ.ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
6. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ.ದವಲ್, ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ),
2. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
3. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
5. ಸಬ್ ಇನ್ಸ್‌ಪೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ಪುಟ್ಟಸ್ವಾಮಿ, ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ.
7. ಶ್ರೀಮತಿ ಗೀತಾ, ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ.
8. ಶ್ರೀಮತಿ ರಾಜಶ್ರೀ, ಕಲ್ಯಾಣ ಇಲಾಖೆ,

ವಾರ್ಡ್ ಸಮಿತಿಯ ಪ್ರಾಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

**ಸಭೆಯಲ್ಲಿ ಮಂಡಿಸಲಾದ ಉದ್ದೇಶಗಳು**

1. ಕಮ್ಮನಹಳ್ಳಿ, ವಾರ್ಡ್ ನಂ.29 ರಲ್ಲಿ ಕೋವಿಡ್-19ರ ರೋಗಿಗಳಿಗಾಗಿ ಕೋವಿಡ್ ವಾರ್ ರೂಂ ಅನ್ನು ಸ್ಥಾಪಿಸುವುದು.
2. ಮೇಲೆ ತಿಳಿಸಿರುವ ಉದ್ದೇಶಕ್ಕಾಗಿ ಕೋವಿಡ್ ಕೇರ್ ಸೆಂಟರ್ ಅನ್ನು ಸ್ಥಾಪಿಸುವುದು.
3. ಈ ಎರಡು ಉದ್ದೇಶಗಳಿಗಾಗಿ ಸ್ಥಳ ಪರೀಕ್ಷೆ ನಡೆಸಿ ಗೊತ್ತುಪಡಿಸುವುದು.
4. ಮೇಲಿನ ಉದ್ದೇಶಕ್ಕಾಗಿ 40 ರಿಂದ 50 ಜನ ಸ್ವಯಂ ಸೇವಕರು, ಡಾಟಾ ಎಂಟ್ರಿ ಮಾಡುವವರು, ದಾದಿಯರು ಮತ್ತು ಶುಶ್ರೂಷಕರನ್ನು ನೇಮಿಸುವುದು.

**ಸಭೆಯ ನಡವಳಿಗಳು**

1) **ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ** ರವರು ಮಾತನಾಡಿ, ಪ್ರತಿ ವಾರ್ಡಿನಲ್ಲಿ ಕೋವಿಡ್ ಸಂಪೂರ್ಣ ನಿಯಂತ್ರಣಕ್ಕಾಗಿ ಪ್ರತಿ ವಾರ್ಡಿನಲ್ಲಿ ಒಂದು ವಾರ್‌ರೂಮ್, ಒಂದು ಕೋವಿಡ್ ಕೇರ್ ಸೆಂಟರ್ ಇವುಗಳಿಗೆ ಅವಶ್ಯಕವಿರುವ ವೈದ್ಯಕೀಯ ಸಿಬ್ಬಂದಿ, ಕಂಪ್ಯೂಟರ್, ಟೇಬಲ್, ಚೇರ್ಸ್ ಹಾಗೂ ಇನ್ನಿತರೆ ಸಾಮಗ್ರಿಗಳನ್ನು ಕಾಮಗಾರಿ ಇಲಾಖೆಯಿಂದ ಸೂಕ್ತ ಪ್ರಸ್ತಾವನೆಯನ್ನು ಸಲ್ಲಿಸಿ, ಅನುಮೋದನೆ ಪಡೆದು ಸ್ಥಾಪಿಸಲು ಮೇಲಾಧಿಕಾರಿಗಳ ಆದೇಶವಿರುತ್ತದೆ. ಆದರೆ ಪ್ರಸ್ತುತ ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿಯ ವಾರ್ಡ್ ಪ್ರದೇಶದಲ್ಲಿ ಸುಸಜ್ಜಿತ ವಾರ್‌ರೂಮ್ ಅನ್ನು ಜ್ಯೋತಿ ಸ್ಕೂಲ್ ಕ್ಯಾಂಪಸ್‌ನಲ್ಲಿ ಸ್ಥಾಪಿಸಿ, ಮಾನ್ಯ ಉಸ್ತುವಾರಿ ಸಚಿವರು ಹಾಗೂ ಸ್ಥಳೀಯ ಶಾಸಕರಿಂದ ವಾರ್‌ರೂಮ್‌ಅನ್ನು ಉದ್ಘಾಟಿಸಲಾಗಿದ್ದು, ಅಗತ್ಯ ಸಲಕರಣೆಗಳು ಮತ್ತು ಸಿಬ್ಬಂದಿಯೊಂದಿಗೆ ವಾರ್‌ರೂಮ್ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುತ್ತದೆ. ಮತ್ತು ಇದೇ ವಾರ್ಡ್ ಪ್ರದೇಶದಲ್ಲಿ ಕೋವಿಡ್ ಕೇರ್ ಸೆಂಟರ್ ಅನ್ನು ಇಂಡಿಯನ್ ಕ್ರೂಸೆಡ್ ಕ್ಯಾಂಪಸ್ ಆವರಣದಲ್ಲಿನ ಸಭಾಂಗಣದಲ್ಲಿ ಸ್ಥಾಪಿಸಲು ಮಾನ್ಯ ಶಾಸಕರು ಸೂಚಿಸಿರುವ ಹಿನ್ನಲೆಯಲ್ಲಿ ಕೋವಿಡ್ ಕೇರ್ ಸೆಂಟರ್ / ಟ್ರೈಯಾಜ್ ಸೆಂಟರ್ / ತುರ್ತು ವಾರ್ಡ್ ನಿರ್ಮಾಣದ ಕಾಮಗಾರಿಯು ತೀವ್ರ ಪ್ರಗತಿಯಲ್ಲಿರುತ್ತದೆ. ಮತ್ತು ಶೀಘ್ರದಲ್ಲಿ ಮಾನ್ಯ ಉಸ್ತುವಾರಿ ಸಚಿವರು, ಸ್ಥಳೀಯ ಲೋಕಸಭಾ ಸದಸ್ಯರು ಹಾಗೂ ಶಾಸಕರುಗಳೊಂದಿಗೆ ಉದ್ಘಾಟಿಸಲಾಗುವುದು. ಆದ್ದರಿಂದ ಈ ವಾರ್ಡ್ ಪ್ರದೇಶಕ್ಕೆ ಮತ್ತೊಂದು ಟ್ರೈಯಾಜ್ ಸೆಂಟರ್ / ವಾರ್‌ರೂಮ್ / ಕೋವಿಡ್ ಕೇರ್ ಸೆಂಟರ್ ನಿರ್ಮಿಸುವ ಅಗತ್ಯವಿರುವುದಿಲ್ಲ ಎಂದು ಸಭೆಗೆ ತಿಳಿಸಿದಾಗ ಸಭೆಯು ಸರ್ವಾನುಮತದಿಂದ ಅಂಗೀಕರಿಸಿತು.

2) ಕೋವಿಡ್ ಸೋಂಕಿತರನ್ನು ಪತ್ತೆ ಹಚ್ಚಿದ ಕೂಡಲೇ ವಾರ್‌ರೂಮ್ ಅನ್ನು ಸಂಪರ್ಕಿಸಿ, ಕೋವಿಡ್ ಕೇರ್ ಸೆಂಟರ್‌ಗೆ ದಾಖಲಿಸಲು ಸುಮಾರು 40–50 ಜನ ಸ್ವಯಂ ಸೇವಕರನ್ನು ಸ್ಥಳೀಯ ವಾರ್ಡ್ ಪ್ರದೇಶದಲ್ಲಿ ಗುರುತಿಸಿ, ಅವರ ಸೇವೆಯನ್ನು ಪಡೆಯಲು ಕಾರ್ಯೋನ್ಮುಖರಾಗಲು ಸಭೆಯಲ್ಲಿ ಹಾಜರಿದ್ದ, ಕಂದಾಯ ಪರಿವೀಕ್ಷಕರು, ಆರೋಗ್ಯ ಹಿರಿಯ ಪರಿವೀಕ್ಷಕರು ಹಾಗೂ ವಾರ್ಡ್ ಸದಸ್ಯ ಕಾರ್ಯದರ್ಶಿಯವರಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

3) **ಡಾ|| ಶಾಹೀನಾ, ವೈದ್ಯಾಧಿಕಾರಿಗಳು, ಆರೋಗ್ಯ ಕೇಂದ್ರ, ವಾರ್ಡ್ ಸಂಖ್ಯೆ.29 ರವರು ಮಾತನಾಡಿ,** ವಾರ್ಡ್ ಸಂಖ್ಯೆ.29, ಆರೋಗ್ಯ ಕೇಂದ್ರದಲ್ಲಿ ಪ್ರತಿದಿನ ಕೋವಿಡ್ ಪರೀಕ್ಷೆಗಳನ್ನು ಕೈಗೊಳ್ಳಲಾಗುತ್ತಿರುತ್ತದೆ. ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಆರ್.ಟಿ.ಪಿ.ಸಿ.ಆರ್ ಮತ್ತು ರ್ಯಾಪಿಡ್ ಪರೀಕ್ಷೆಗಳನ್ನು ಕೈಗೊಳ್ಳಲಾಗುತ್ತಿದ್ದು, ಒಟ್ಟು 37155 ಜನರಿಗೆ ಆರ್.ಟಿ.ಪಿ.ಸಿ.ಆರ್ ಪರೀಕ್ಷೆ ಮಾಡಲಾಗಿರುತ್ತದೆ. ಒಟ್ಟು 6375 ಜನರಿಗೆ ರ್ಯಾಪಿಡ್ ಪರೀಕ್ಷೆ ಮಾಡಲಾಗಿರುತ್ತದೆ. ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ 528 ಸಕ್ರಿಯ ಪ್ರಕರಣಗಳಿದ್ದು, ಅದರಲ್ಲಿ 502 ಹೋಮ್ ಐಸೋಲೇಷನ್ ನಲ್ಲಿರುತ್ತಾರೆ. 22 ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುತ್ತಾರೆ ಹಾಗೂ 4 ಜನ ಮರಣ ಹೊಂದಿರುತ್ತಾರೆ ಎಂದು ಸಭೆಗೆ ತಿಳಿಸಿದರು.

4) ಕೋವಿಶೀಲ್ಡ್ ವ್ಯಾಕ್ಸಿನೇಷನ್ ಅನ್ನು ವಾರ್ಡ್ ಸಂಖ್ಯೆ.29ರ ಆರೋಗ್ಯ ಕೇಂದ್ರದಲ್ಲಿ ಹಾಗೂ ಇದೇ ವಾರ್ಡಿನ ಸಿ.ಎಂ.ಆರ್ ಕಾಲೇಜ್ ಆವರಣದಲ್ಲಿ ಪ್ರತಿ ನಿತ್ಯ 10–00 ಗಂಟೆಯಿಂದ 4–00 ಗಂಟೆಯ ವರೆಗೆ ಸಾರ್ವಜನಿಕರಿಗೆ ವ್ಯಾಕ್ಸಿನೇಷನ್ ಕೊಡಲಾಗುತ್ತಿರುತ್ತದೆ. ಪ್ರಸ್ತುತ 18000 ಜನರಿಗೆ ವ್ಯಾಕ್ಸಿನೇಷನ್ ಅನ್ನು ನೀಡಲಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

5) ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

ಪ್ರತಿಯನ್ನು

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.